ಕೃಷಿ ವಿಶ್ವ ವಿದ್ಯಾನಿಲಯ
ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
ಜಿ.ಕೆ.ವಿ.ಕೆ., ಬೆಂಗಳೂರು–560065
* ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

ದಿನಾಂಕ: 04.08.2020

## ಬೆಂಗಳೂರು ನಗರ ಜಿಲ್ಲೆಗೆ ಸೀಮಿತವಾಗಿದೆ.

### ಕಳೆದ ಐದು ದಿನಗಳ ಹವಾಮಾನ ಸಾರಂಶ

| ನಿಯತಾಂಕಗಳು | 31.7.20 | 01.8.20 | 02.8.20 | 03.8.20 | 04.8.20 |
|---|---|---|---|---|---|
| ಮಳೆ (ಮಿ ಮೀ) | 0 | 0 | 1.6 | 10.0 | 0 |
| ಗರಿಷ್ಠ ಉಷ್ಣಾಂಶ(ಡಿ.ಸೆ. ) | 28.0 | 29.0 | 28.0 | 28.8 | 26.2 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 19.2 | 18.8 | 19.0 | 18.8 | 18.2 |
| ಮೋಡ ( ಪ್ರಮಾಣ) | 8 | 4 | 6 | 8 | 6 |
| ಆರ್ದ್ರತೆ 7.20 ಬೆ (ಶೇ) | 95 | 93 | 93 | 95 | 91 |
| ಆರ್ದ್ರತೆ 2.20 ಮ (ಶೇ) | 57 | 58 | 56 | 64 | -- |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 3.5 | 6.8 | 9.3 | 9.6 | 10.8 |
| ಗಾಳಿಯ ದಿಕ್ಕು ( ಡಿಗ್ರಿ) | 270 | 230 | 270 | 230 | 230 |

### ಈ ವಾರದ ಹವಾಮಾನ ಮುನ್ಸೂಚನೆ (ಭಾರತೀಯ ಹವಾಮಾನ ಇಲಾಖೆ)
(ದಿನಾಂಕ 05–08–2020 ರಿಂದ 09–08–2020 ವರೆಗೆ)

| ನಿಯತಾಂಕಗಳು | 05.08.2020 | 06.08.2020 | 07.08.2020 | 08.08.2020 | 09.08.2020 |
|---|---|---|---|---|---|
| ಮಳೆ (ಮಿ ಮೀ) | 5 | 5 | 4 | 4 | 3 |
| ಗರಿಷ್ಠ ಉಷ್ಣಾಂಶ(ಡಿ.ಸೆ. ) | 27 | 27 | 28 | 28 | 29 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 20 | 21 | 20 | 20 | 21 |
| ಮೋಡ ( ಪ್ರಮಾಣ) | 7 | 7 | 6 | 6 | 7 |
| ಆರ್ದ್ರತೆ 7.20 ಬೆ (ಶೇ) | 83 | 83 | 80 | 80 | 83 |
| ಆರ್ದ್ರತೆ 2.20 ಮ (ಶೇ) | 69 | 68 | 67 | 67 | 69 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 14 | 12 | 9 | 8 | 8 |
| ಗಾಳಿಯ ದಿಕ್ಕು ( ಡಿಗ್ರಿ) | 248 | 248 | 248 | 257 | 292 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶ 27.0–29.0 °C ಮತ್ತು ಕನಿಷ್ಠ 20.0–21.0 ° C ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ 80–83 % ಇದ್ದು ಮಧ್ಯಾಹ್ನ 67–69 % ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ 8–14 ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

### ವಾರದ ಮಳೆಯ ಮುನ್ಸೂಚನೆ ದಿನಾಂಕ 09–08–2020 ರಿಂದ 15–08–2020

| ರಾಜ್ಯ | ಪ್ರದೇಶ | ವಾಸ್ತವಿಕ ಮಳೆ (ಮಿ.ಮೀ) | ವಾಡಿಕೆ ಮಳೆ (ಮಿ.ಮೀ) | ಬದಲಾವಣೆ (ಪ್ರತಿಶತ %) |
|---|---|---|---|---|
| ಕರ್ನಾಟಕ | ದಕ್ಷಿಣ ಒಳನಾಡು | 5.8 | 3.1 | 90.6 |

**“ಅಸಲೇ ಮಳೆಗೆ, ನೆಲವೆಲ್ಲಾ ಹಸಿರೇ!”**

- ಆಶ್ಲೇಷ ಮಳೆಯು ಕಾಲವು ಆಗಸ್ಟ್ ತಿಂಗಳ 03 ರಿಂದ ಆಗಸ್ಟ್ ತಿಂಗಳ 16 ರ ವರೆಗೆ ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು 54.3 ಮಿ.ಮೀ. ವರೆಗೆ ಮಳೆಯಾಗುತ್ತದೆ.

### ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಹವಾಮಾನ ಆಧಾರಿತ ಕೃಷಿ ಸಲಹೆಗಳು |
|---|---|
| ಸಾಮಾನ್ಯ | ➢ ಕೋವಿಡ್–19 ವೈರಾನುವಿನ ನಿಯಂತ್ರಣಕ್ಕಾಗಿ ರೈತರು ವ್ಯಕ್ತಿಯಿಂದ ವ್ಯಕ್ತಿಗೆ 3–4 ಅಡಿಗಳ ಅಂತರವನ್ನು ವಿಶ್ರಾಂತಿ ಸಮಯದಲ್ಲಿ, ಆಹಾರ ಸೇವನೆಯ ಸಂದರ್ಭದಲ್ಲಿ, ಕೃಷಿ ಉತ್ಪನ್ನಗಳನ್ನು ಸಂಗ್ರಹಿಸುವಾಗ, ಇಳಿಸುವಾಗ/ಹೊತ್ತೊಯ್ದು ಅಡಕಿಸುವಾಗ ಹೀಗೆ ಪ್ರತಿ ಹಂತದಲ್ಲೂ ಸುರಕ್ಷಿತಾ ದೃಷ್ಟಿಯಿಂದ ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳಬೇಕು. ಎಲ್ಲಾ ಕೃಷಿ ಪರಿಕಂಗಳ ಅಂಗಡಿಗಳು ತೆರೆದಿರುತ್ತವೆ. ಕೃಷಿಕರು ಈ ಅಂಗಡಿಗಳಲ್ಲಿ ಬೀಜ, ಗೊಬ್ಬರ ಮತ್ತು ರಾಸಾಯನಿಕಗಳನ್ನು ಕೊಳ್ಳುವಾಗ ಪರಸ್ಪರ 4 ಅಡಿಗಳ ಅಂತರವನ್ನು ಕಾಯ್ದುಕೊಳ್ಳಬೇಕು.<br>➢ ಆರ್ಧ್ರತೆ ಹೆಚ್ಚಿರುವುದರಿಂದ ಬಿತ್ತನೆ ಮಾಡಿರುವ ಬೆಳೆಗಳಲ್ಲಿ ಕೀಟ ಹಾಗೂ ರೋಗಗಳು ಹೆಚ್ಚಬಹುದು.ಆದುದರಿಂದ ಬೆಳೆಗಳನ್ನಾಧರಿಸಿ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಬೇಕು.<br>➢ ಮಳೆಯ ಏರುಪೇರಿಗೆ ಸುಸ್ಥಿರ ಆದಾಯಕೋಸ್ಕರ ಜಮೀನಿನ ಬದುಗಳ ಮೇಲೆ ಹೆಬ್ಬೇವು, ಸಿಲ್ವರ್ ಓಕ್ ಮತ್ತು ಸರ್ವೆ ಮರಗಳನ್ನು ನೆಡುವುದು ಸೂಕ್ತ.<br>➢ ಮಳೆಯ ಏರುಪೇರಿಗೆ ಸುಸ್ತಿರ ಆದಾಯಕೋಸ್ಕರ ಜಮೀನಿನ ಬದುಗಳ ಮೇಲೆ/ಸುತ್ತಲು ಮಾವು(ಮಲ್ಲಿಕ ಮತ್ತು ಬಾದಾಮಿ ಕಸಿ ಗಿಡ) ಬೆಳೆಯುವುದು ಸೂಕ್ತ.<br>➢ ಎಲ್ಲೆಲ್ಲಿ ದೀರ್ಘಾವದಿ ಬೆಳೆಗಳು ( ತೊಗರಿ ಮತ್ತು ಹರಳು) ಬಿತ್ತನೆ ಮಾಡಿದಲ್ಲಿ ಕಳೆ ನಿರ್ವಹಣೆ, ಮಣ್ಣು ಮತ್ತು ನೀರಿನ ಸಂರಕ್ಷಣೆಗೆ ಅಂತರ ಬೇಸಾಯವನ್ನು ಕೈಗೊಳ್ಳುವುದು.<br>➢ ಬಿತ್ತನೆಗೆ ಭೂಮಿಯನ್ನು ಸಿದ್ದಪಡಿಸಿಕೊಳ್ಳಿ ಮತ್ತು 15 ದಿನಗಳ ಮುಂಚೆ ಕೊಟ್ಟಿಗೆ ಗೊಬ್ಬರವನ್ನು ಭೂಮಿಗೆ ಸೇರಿಸಿ.<br>➢ ಉತ್ತಮ ಮಳೆಯ ಮುನ್ಸೂಚನೆ ಮತ್ತು ಭೂಮಿಯಲ್ಲಿ ಸಾಕಷ್ಟು ತೇವಾಂಶವಿರುವುದರಿಂದ ಮುಂಗಾರು ಬಿತ್ತನೆಯನ್ನು ಮುಂದುವರಿಸಿ.<br>➢ ಈಗಾಗಲೇ ಬಿತ್ತನೆಯಾಗಿರುವ ತೊಗರಿ ಮತ್ತುಜೋಳದ ಬೆಳೆಗಳಲ್ಲಿ ಮೇಲು ಗೊಬ್ಬರವನ್ನು ಕೊಡಬೇಕು.<br>➢ ಗಾಳಿಯ ವೇಗವು ಹೆಚ್ಚಾಗಿರುವುದರಿಂದ ಬಾಳೆ ಮತ್ತು ಇನ್ನಿತರ ತರಕಾರಿ ಬೆಳೆಗಳಿಗೆ ರಕ್ಷಣೆ ಕೊಡಿ.<br>➢ ಗಾಳಿಯ ವೇಗವು ಹೆಚ್ಚಾಗಿರುವ್ಯದರಿಂದ ಕೃಷಿ ಮತ್ತು ತೋಟಗಾರಿಕಾ ಬೆಳೆಗಳಲ್ಲಿ ಔಷದ ಸಿಂಪಡಣೆಯನ್ನು ಮುಂದೂಡಿ.<br>➢ ಈಗಾಗಲೇ ಮೇ ಮತ್ತು ಜೂನ್ ತಿಂಗಳಲ್ಲಿ ಬಿತ್ತನೆ ಮಾಡಿರುವಂತಹ ದೀರ್ಘಾವಧಿ ಬೆಳೆಗಳಾದ ತೊಗರಿ, ಹರಳು ಬಿತ್ತನೆಯಾಗಿದ್ದಲ್ಲಿ ಮೇಲೆ ತಿಳಿಸಿರುವ ಬೇಸಾಯ ಕ್ರಮಗಳ ಜೊತೆಗೆ, ಸಾಲುಗಳ ಮಧ್ಯದಲ್ಲಿರುವ ಮಣ್ಣನ್ನು ಗಿಡದ ಬುಡಕ್ಕೆ ಹಾಕುವುದರಿಂದ ಭೂಮಿಯು ದಿಂಡು ಸಾಲಾಗಿ ಪರಿವರ್ತನೆಯಾಗುತ್ತದೆ ಇದರಿಂದ ಗಿಡಗಳಿಗೆ ಹೆಚ್ಚು ಸಿಗುವಂತಾಗಿ ಒಣಹವೆಯ ಅನಾನುಕೂಲತೆಯನ್ನು ಮುಂದೂಡಬಹುದು.<br>➢ ಕಿತ್ತಂತಹ ಕಳೆ ಮತ್ತು ಬದುಗಳಲ್ಲಿ ಬೆಳೆದಿರುವ ಗ್ಲಿರೀಸಿಡಿಯ (ಹಸಿರೆಲೆ ಗೊಬ್ಬರದ ಗಿಡ) ಸೊಪ್ಪನ್ನು ಉಪಯೋಗಿಸಿಕೊಂಡು ಸಾಲುಗಳ ಮಧ್ಯದಲ್ಲಿ ಭೂ–ಹೊದಿಕೆಯಾಗಿ ಹರಡುವುದು<br>➢ ಇಳಿಜಾರಿಗೆ ಅಡ್ಡಲಾಗಿ ಉಳುಮೆಯನ್ನು ಮಾಡಿ ಇದರಿಂದ ಮಣ್ಣಿನ ಸವಕಳಿ ಕಡಿಮೆಯಾಗುತ್ತದೆ ಮತ್ತು ತೇವಾಂಶದ ಸಂರಕ್ಷಣೆಯಾಗುತ್ತದೆ.<br>**ಎರಡುಬೆಳೆ ಪದ್ಧತಿಯಲ್ಲಿ ಈ ಕೆಳಗಿನ ಮಧ್ಯಮಾವಧಿ ಮತ್ತು ಕಡಿಮೆ ಅವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**<br>ರಾಗಿ: ಎಂ.ಆಲ್–365, ಕೆ,ಎಂ.ಆರ್–301 ಮತ್ತು 204, ಜಿ.ಪಿ.ಯು–28 ಮತ್ತು 66<br>ಮುಸುಕಿನ ಜೋಳ: ಗಂಗಾ–11, ಡೆಕ್ಕನ್–103, ವಿಜಯ ಕಾಂಪ್ರೋಸಿಟ್, ಕಾಂಪ್ರೋಸಿಟ್ ಎನ್.ಎ.ಸಿ–6004,6002, ನಿತ್ಯಶ್ರೀ–ಸಂಕರಣ ತಳಿ<br>ಅಲಸಂದೆ : ಟಿ.ವಿ.ಎಕ್ಸ್–944, ಕೆ.ಬಿ.ಸಿ–1, ಅವರೆ: ಎಚ್.ಎ–3 ಮತ್ತು 4 ತಳಿಯನ್ನು ಆಯ್ಕೆ ಮಾಡಿಕೊಳ್ಳಬಹುದು.<br>ಹೆಸರು :ಪಿ.ಎಸ್–16, ಪಿ.ಡಿ.ಎಮ್–84, 178 , ಉದ್ದು: ಕರಗಾವ್–3, ಟಿ–9, ರಶ್ಮಿ<br>ನವಣೆ: ಆರ್.ಎಸ್–118, ಕೆ–221–1,ಪಿ.ಎಸ್–4, ಎಸ್.ಐ.ಎ–326<br>ಸಾಮೆ: ಸಿ.ಒ–2, ಪಿ,ಆರ್.ಸಿ–3,ಒ.ಎಲ್.ಎಂ–203<br>ಹಾರಕ: ಪಿ.ಎಸ್.ಸಿ–1, ಜೆ.ಎನ್.ಕೆ–364, ಆರ್.ಬಿ.ಕೆ–155, ಜಿ.ಪಿ.ಯು.ಕೆ–3 |
| ಮಾವು | ➢ ಸಸಿಗಳನ್ನು ನೆಡಲು ಜೂನ್–ಜುಲೈ ಅತ್ಯಂತ ಸೂಕ್ತ. ನೆಡುವ ಕಾಲಕ್ಕೆ ಗಿಡಗಳ ವಯಸ್ಸು ಒಂದು ವರ್ಷದಷ್ಟಿದ್ದರೆ ಉತ್ತಮ. ಅವುಗಳನ್ನು ಹೆಪ್ಪು ಸಮೇತ ನೆಡಬೇಕು. . ಪ್ರತಿ ಗುಂಡಿಯ ಮಧ್ಯೆ ಹೆಪ್ಪು ಹಿಡಿಸುವಷ್ಟೇ ಗಾತ್ರದ ತಗ್ಗು ತೆಗೆದು ಅದರಲ್ಲಿ ಗಿಡವನ್ನು ನೆಟ್ಟಗೆ ಇಳಿಸಿ ಬುಡದ ಸುತ್ತ ಹಸಿ ಮಣ್ಣನ್ನು ತಳ್ಳಿ, ಚೆನ್ನಾಗಿ ಅದುಮಿ ತುಳಿಯಬೇಕು. ಕಸಿ ಗಂಟು ನೆಲಮಟ್ಟದಿಂದ 15–20 ಸೆಂ.ಮೀ. ಎತ್ತರದರುವುದು ಅಗತ್ಯ. ಗಿಡಗಳಿಗೆ ಆಸರೆ ಕೋಲು ಸಿಕ್ಕಿಸಿ ಕಟ್ಟಿ, ಕೈ ನೀರು ಕೊಡಬೇಕು.<br>➢ ಗಿಡಗಳ ಸುತ್ತಲು ಪಾತಿ ಮಾಡಿ, ಶಿಫಾರಸ್ಸು ಮಾಡಿದ ಗೊಬ್ಬರಗಳನ್ನು ಮಳೆಗಾಲ(ಜೂನ್–ಜುಲೈ) ದಲ್ಲಿ ಒದಗಿಸಬೇಕು.<br>➢ ಕಳೆ ನಿರ್ವಹಣೆಗೆ ಮತ್ತು ಭೂಮಿಯಲ್ಲಿನ ತೇವಾಂಶವನ್ನು ಸಂರಕ್ಷಿಸಲು ಅಂತರ ಬೇಸಾಯ ಮಾಡಬೇಕು.<br>➢ ಮಾವಿನಲ್ಲಿ ಒತ್ತಾಗಿ ಬೆಳೆದಿರುವ ರೆಂಬೆಗಳನ್ನು ಕತ್ತರಿಸಬೇಕು ಇದರಿಂದ ಸೂರ್ಯನ ಬೆಳಕು ಒಳಬಾಗಕ್ಕೆ ಬೀಳುತ್ತದೆ ಇದರಿಂದ ಒಳಭಾಗದಲ್ಲೂ ಮುಂದಿನ ಬಾರಿ ಹೂ ಮತ್ತು ಕಾಯಿ ಕಚ್ಚುತ್ತವೆ. |

| | ಹೈನುಗಾರಿಕೆ |
|---|---|
| ಪಶುಸಂಗೋಪನೆ | ➢ **ನೆರಡಿ ರೋಗ:** ಜ್ವರ, ಕೆಲವೊಮ್ಮೆ ಇದ್ದಕ್ಕಿದ್ದ ಹಾಗೆ ದನಗಳು ಸಾಯುವುದು, ಮೇವು ಬಿಡುವುದು, ಹೆಚ್ಚು ನಾಡಿ ಬಡಿತ, ಉಸಿರಾಟ, ಸಾವಿನ ಸಮಯದಲ್ಲಿ ಮೂಗು, ಬಾಯಿ ಮತ್ತು ಗುದದ್ವಾರದಿಂದ ರಕ್ತಸ್ರಾವವಾಗುತ್ತದೆ. ಇದರ ಹತೋಟಿಗೆ ಪ್ರತಿ ವರ್ಷ **ಜುಲೈ/ಆಗಸ್ಟ್** ತಿಂಗಳಲ್ಲಿ ಈ ರೋಗದ ಲಸಿಕೆಯನ್ನು ಕೊಡಿಸಿ ತಡೆಗಟ್ಟಬಹುದು.<br>➢ ಕೊಟ್ಟಿಗೆಯ ಉದ್ದವಾದ ಭಾಗ ಪೂರ್ವ–ಪಶ್ಚಿಮ ದಿಕ್ಕಿನಲ್ಲಿದ್ದು, ಸಾಕಷ್ಟು ಸೂರ್ಯನ ಬೆಳಕು ಕೊಟ್ಟಿಗೆಯೊಳಗೆ ಬೀಳುವಂತಿರಬೇಕು.ಇದು ಕೊಟ್ಟಿಗೆಯ ಒಳಗಿನ ನೆಲ ಒಣಗಲು ಸಹಾಯವಾಗುತ್ತದೆ ಮತ್ತು ಹಲವಾರು ರೋಗಗಳಿಗೆ ಕಾರಣವಾಗುವ ಸೂಕ್ಷ್ಮಾಣು ಜೀವಿಗಳ ಬೆಳವಣಿಗೆಯನ್ನು ಕುಂಠಿತಗೊಳಿಸುತ್ತದೆ. |


**ನೋಡಲ್ ಅಧಿಕಾರಿ:**

ಕೃಷಿ ಹವಾಮಾನ ವಿಭಾಗ

**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**